
ನನ್ನ ಜೀವನವೇ ನನ್ನ ಸಂದೇಶ


ನನ್ನ ಜೀವನವೇ ನನ್ನ ಸಂದೇಶ
मेरा जीवन ही मेरा संदेश है

22-05-2024 ರಂದು ರಾಜ್ಯದ ಶಕ್ತಿ ಕೇಂದ್ರವಾದ ವಿಧಾನ ಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದ ತೆರೆದ ಪ್ರದೇಶದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಾಸಕ್ತ ಕಂಚಿನ ಪ್ರತಿಮೆಗೆ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಗೆ ಉಂಟಾಗುತ್ತಿದ್ದನ್ನು ಬಹಳ ನೋವಿನಿಂದ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಸರ್ಕಾರದ ಗಮನ ಸೆಳೆದು ಗಾಂಧಿಜೀ ಪುತ್ಥಳಿಯನ್ನು ತ್ಯಾಜ್ಯ ಮುಕ್ತವನ್ನಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇಶದ ಪ್ರತಿಷ್ಠಿತ ಕಟ್ಟಡವೆಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ವಿಧಾನ ಸೌಧದ ವೀಕ್ಷಣೆಗೆ ನಿತ್ಯವೂ ದೇಶ ವಿದೇಶಗಳಿಂದ, ರಾಜ್ಯ, ಅಂತಾರಾಜ್ಯಗಳಿಂದ ಗಣ್ಯರು, ಪ್ರವಾಸಿಗರು, ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಆ ಸಂದರ್ಭದಲ್ಲಿ ಎಲ್ಲರೂ ಕಡ್ಡಾಯವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆ ವೀಕ್ಷಿಸಿ ಅಲ್ಲಿ ಛಾಯಾ ಚಿತ್ರಗಳನ್ನು ತೆಗೆದುಕೊಳ್ಳುವ ದೃಶ್ಯವು ನಿತ್ಯ ಸದೃಶ್ಯವಾದುದ್ದು. ಆದರೆ ಸದರಿ ಪ್ರತಿಮೆಯು ತೆರೆದ ಪ್ರದೇಶದಲ್ಲಿರುವುದರಿಂದ ವಾತಾವರಣ ಹಾಗೂ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗುತ್ತಿತ್ತು. ಇದನ್ನು ಗಮನಿಸಿ ಮಹಾತ್ಮ ಗಾಂಧಿಜೀಯವರ ಪುತ್ಥಳಿಗೆ ತೋರಲಾಗುತ್ತಿರುವ ಅಗೌರವದ ಬಗ್ಗೆ ವ್ಯಥೆಪಟ್ಟು ಕೂಡಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳಿಗೆ ಎರಡು ಬಾರಿ ಪತ್ರ ಬರೆದು ಪ್ರತಿಮೆಯನ್ನು ಶುಭ್ರವಾಗಿರಿಸಿ ಸೂಕ್ತ ಗೌರವ ಸಲ್ಲಿಸುವಂತೆ ಸೂಚನೆ ನೀಡಿದ್ದರು. ಈ ಬಗ್ಗೆ ರಾಜ್ಯ ಕಾನೂನು, ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸಹ ಸೂಕ್ತ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ನೈಜ ಸೌಂದರ್ಯ, ಬಾಹ್ಯ ಆಕರ್ಷಣೆ ಕುಂದದಂತೆ ನಿರಂತರವಾಗಿ ಸೂಕ್ತ ಸಂರಕ್ಷಣಾ ಕ್ರಮ ಕೈಗೊಳ್ಳುವ ಕುರಿತು ಸೂಕ್ತ ಸಾಧನ ಬಳಸಿ ರಾಷ್ಟ್ರಪಿತ ಗಾಂಧೀಜಿಯವರ ಪ್ರತಿಮೆಗೆ ಸೂಕ್ತ ಗೌರವ ಸಲ್ಲಿಸಿ ಶುಭ್ರವಾಗಿಡುವಂತೆ ವಿಧಾನ ಪರಿಷತ್ ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಅಧಿಕಾರಿಗಳಿಗೆ ಆದೇಶಿಸಿದರು. ಈ ಸಂದರ್ಭದಲ್ಲಿ ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಸಂಯುಕ್ತ ಕರ್ನಾಟಕ

# ಗಾಂಧೀಜಿ ಪುತ್ಥಳಿ ಸ್ವಚ್ಛತೆ: ಸಭಾಪತಿ ಪರಿಶೀಲನೆ

**ಬೆಂಗಳೂರು:**ನಗರದ ವಿಧಾನಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದಲ್ಲಿರುವ ಮಹಾತ್ಮ ಗಾಂಧೀಜಿಯವರ ಕಂಚಿನ ಪ್ರತಿಮೆಯನ್ನು ಸ್ವಚ್ಛಗೊಳಿಸಿರುವುದನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ್ ವೀಕ್ಷಣೆ ಮಾಡಿದರು.

ಸುಮಾರು ವರ್ಷಗಳಿಂದ ಪ್ರತಿಮೆಯನ್ನು ಸ್ವಚ್ಛಮಾಡದೆ ಹಾಗೆ ಬಿಡಲಾಗಿತ್ತು. ಈ ಕುರಿತು ಸಭಾಪತಿಗಳು ಪ್ರವಾಸೋದ್ಯಮ ಇಲಾಖೆಗೆ ಎರಡು ಪತ್ರ ಬರೆದಿದ್ದರು. ಪ್ರತಿಮೆ ಮೇಲೆ ಪಕ್ಷಿಗಳು ಕುಳಿತು ಮಲಿನ ಮಾಡಿವೆ. ರಾಜ್ಯ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ವಿಧಾನಸೌಧ ವೀಕ್ಷಣೆಗೆ ಬರುವ ಪ್ರವಾಸಿಗರು, ಗಣ್ಯವ್ಯಕ್ತಿಗಳು ಕಂಚಿನ ಪ್ರತಿಮೆ ಬಳಿ ನಿಂತು ಫೋಟೋ ತೆಗೆದುಕೊಂಡು ಹೋಗುತ್ತಾರೆ. ಆದರೆ, ಪ್ರತಿಮೆ ಮಾತ್ರ ಅಸ್ವಚ್ಛತೆಯಿಂದ ಕೂಡಿದೆ. ಆದ್ದರಿಂದ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದರು.



ಬೆಂಗಳೂರಿನ ವಿಧಾನಸೌಧ ಆವರಣದಲ್ಲಿರುವ ಗಾಂಧೀಜಿ ಅವರ ಕಂಚಿನ ಪುತ್ಥಳಿಯನ್ನು, ಸಭಾಪತಿ ಬಸವರಾಜ್ ಹೊರಟ್ಟಿ, ಸಚಿವ ಎಚ್.ಕೆ.ಪಾಟೀಲ್ ಬುಧವಾರ ವೀಕ್ಷಣೆ ಮಾಡಿದರು.

ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಸಂಸದೀಯ ವ್ಯವಹಾರ ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ ಪಾಟೀಲ್ ಬುಧವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪುತ್ಥಳಿಯ ಮೇಲೆ ಪಕ್ಷಿಗಳು ಕುಳಿತುಕೊಳ್ಳದಂತೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಇಲ್ಲದಿದ್ದರೆ ಪ್ರತಿಮೆ ಸೌಂದರ್ಯಕ್ಕೆ ಧಕ್ಕೆಯಾಗಲಿದೆ ಎಂದು ಅಧಿಕಾರಿಗಳಿಗೆ ಹೇಳಿದರು. ಇದೇ ವೇಳೆ ಸಭಾಪತಿ ಅವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಇದ್ದರು.

ಮುಖ್ಯಸುದ್ದಿ

ಮೇ 23. 2024, ಗುರುವಾರ

# ವಿಧಾನಸೌಧದ ಆವರಣದಲ್ಲಿನ ಗಾಂಧಿಜೀ ಪುತ್ತಳಿ ರಕ್ಷಣೆಗೆ ಕ್ರಮ



**ಬೆಂಗಳೂರು, ಮೇ 22:** ರಾಜ್ಯದ ಶಕ್ತಿ ಕೇಂದ್ರವಾದ ವಿಧಾನಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದ ತೆರೆದ ಪ್ರದೇಶದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಾಸಕ್ತ ಕಂಚಿನ ಪ್ರತಿಮೆಗೆ ಪಕ್ಷಿಗಳ ಮಲಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಗೆ ಉಂಟಾಗುತ್ತಿದ್ದನ್ನು ಬಹಳ ನೋವಿನಿಂದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರದ ಗಮನ ಸೆಳೆದು ಗಾಂಧಿಜೀ ಪುತ್ತಳಿಯನ್ನು ತ್ಯಾಜ್ಯ ಮುಕ್ತವನ್ನಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇಶದ ಪ್ರತಿಷ್ಠಿತ ಕಟ್ಟಡವೆಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ವಿಧಾನಸೌಧದ ವೀಕ್ಷಣೆಗೆ ನಿತ್ಯವೂ ದೇಶ-ವಿದೇಶಗಳಿಂದ, ಗಣ್ಯರು, ಪ್ರವಾಸಿಗರು, ಹಾಗೂ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಆ ಸಂದರ್ಭದಲ್ಲಿ ಎಲ್ಲರೂ ಕಡ್ಡಾಯವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆ ವೀಕ್ಷಿಸಿ ಅಲ್ಲಿ ಛಾಯಾಚಿತ್ರಗಳನ್ನು ತೆಗೆದುಕೊಳ್ಳುವ ದೃಶ್ಯ ಸಾಮಾನ್ಯವಾಗಿದೆ. ಆದರೆ ಈ ಪ್ರತಿಮೆ ತೆರೆದ ಪ್ರದೇಶದಲ್ಲಿರುವುದರಿಂದ ವಾತಾವರಣ ಹಾಗೂ ಪಕ್ಷಿಗಳ ಮಲಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗಿತ್ತು, ಇದನ್ನು ಗಮನಿಸಿ ಗಾಂಧಿಜೀ ಪುತ್ತಳಿಗೆ ತೋರಲಾಗುತ್ತಿರುವ ಅಗೌರವದ ಬಗ್ಗೆ ವ್ಯಥೆಪಟ್ಟು ಕೂಡಲೇ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗೆ ಎರಡು ಬಾರಿ ಪತ್ರ ಬರೆದು ಪ್ರತಿಮೆಯನ್ನು ಶುಭ್ರವಾಗಿರಿಸಿ ಸೂಕ್ತ ಗೌರವ ಸಲ್ಲಿಸುವಂತೆ ಸೂಚನೆ ನೀಡಿದ್ದರು.

ಈ ಬಗ್ಗೆ ಕಾನೂನು, ಸಂಸದೀಯ ವ್ಯವಹಾರ ಸಚಿವ ಎಚ್.ಕೆ ಪಾಟೀಲರು ಸಹ ಸೂಕ್ತ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಸಭಾಪತಿ ಹೊರಟ್ಟಿಯವರ ಒತ್ತಾಯಪೂರ್ವಕ ಆಗ್ರಹ ಹಾಗೂ ಸಚಿವ ಎಚ್.ಕೆ ಪಾಟೀಲರ ಸೂಚನೆಯಂತೆ ಅಧಿಕಾರಿಗಳು ರಾಷ್ಟ್ರಪಿತ ಮಹಾತ್ಮ ಗಾಂಧಿಜೀಯವರ ಪುತ್ತಳಿಗೆ ರಾಸಾಯನಿಕಯುಕ್ತ ಪದಾರ್ಥ ಹೊಂದಿದ ಸಾಧನವನ್ನು ಬಳಸಿ ಪಕ್ಷಿಗಳು ಪುತ್ತಳಿ ಮೇಲೆ ಕುಳಿತುಕೊಳ್ಳದಂತೆ ಕ್ರಮ ಕೈಗೊಂಡಿದ್ದು ಇಂದು ಸಭಾಪತಿ ಹೊರಟ್ಟಿ ಹಾಗೂ ಸಚಿವ ಎಚ್.ಕೆ ಪಾಟೀಲರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪುತ್ತಳಿಯ ಮೇಲೆ ಪಕ್ಷಿಗಳ ಮಲ-ಮೂತ್ರ ಬೀಳದಂತೆ ಹಾಗೂ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗದಂತೆ ಸೂಕ್ತ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು.

ಗಾಂಧೀಜಿಯವರ ಪ್ರತಿಮೆಯ ನೈಜ ಸೌಂದರ್ಯ, ಬಾಹ್ಯ ಆಕರ್ಷಣೆ ಕುಂದದಂತೆ ನಿರಂತರವಾಗಿ ಸೂಕ್ತ ಸಂರಕ್ಷಣಾ ಕ್ರಮ ಕೈಗೊಳ್ಳುವ ಕುರಿತು ಸೂಕ್ತ ಸಾಧನ ಬಳಸಿ ಗಾಂಧೀಜಿಯವರ ಪ್ರತಿಮೆಗೆ ಸೂಕ್ತ ಗೌರವ ಸಲ್ಲಿಸಿ ಶುಭ್ರವಾಗಿಡುವಂತೆ ಹೊರಟ್ಟಿ ಅಧಿಕಾರಿಗಳಿಗೆ ಸೂಚಿಸಿದರು.

ಮಹಾತ್ಮ ಗಾಂಧಿಜೀಯವರ ಪ್ರತಿಮೆಯ ಸಂರಕ್ಷಣೆ ಕುರಿತಂತೆ ಹೊರಟ್ಟಿಯವರಿಂದ ವ್ಯಕ್ತವಾದ ಕಾಳಜಿ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ. ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಮಹೇಶ ವಾಳ್ವೇಕರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

# ವಿಧಾನಸೌಧದ ಆವರಣದಲ್ಲಿರುವ ಮಹಾತ್ಮ ಗಾಂಧಿಜೀ ಪುತ್ಥಳಿ ಸಂರಕ್ಷಣೆಗೆ ಅಗತ್ಯ ಕ್ರಮ

**ಉತ್ತರಪ್ರಭ ಸುದ್ದಿ ಬೆಂಗಳೂರು:** ರಾಜ್ಯದ ಶಕ್ತಿ ಕೇಂದ್ರವಾದ ವಿಧಾನ ಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದ ತೆರೆದ ಪ್ರದೇಶದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಾಸಕ್ತ ಕಂಚಿನ ಪ್ರತಿಮೆಗೆ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಗೆ ಉಂಟಾಗುತ್ತಿದ್ದನ್ನು ಬಹಳ ನೋವಿನಿಂದ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಸರ್ಕಾರದ ಗಮನ ಸೆಳೆದು ಗಾಂಧಿಜೀ ಪುತ್ಥಳಿಯನ್ನು ತ್ಯಾಜ್ಯ ಮುಕ್ತವನ್ನಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇಶದ ಪ್ರತಿಷ್ಠಿತ ಕಟ್ಟಡವೆಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ವಿಧಾನ ಸೌಧದ ವೀಕ್ಷಣೆಗೆ ನಿತ್ಯವೂ ದೇಶ ವಿದೇಶಗಳಿಂದ, ರಾಜ್ಯ, ಅಂತಾರಾಜ್ಯಗಳಿಂದ ಗಣ್ಯರು, ಪ್ರವಾಸಿಗರು, ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಆ ಸಂದರ್ಭದಲ್ಲಿ ಎಲ್ಲರೂ ಕಡ್ಡಾಯವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆ ವೀಕ್ಷಿಸಿ ಅಲ್ಲಿ ಛಾಯಾ ಚಿತ್ರಗಳನ್ನು ತೆಗೆದುಕೊಳ್ಳುವ ದೃಶ್ಯವು ನಿತ್ಯ ಸದೃಶ್ಯವಾದುದ್ದು. ಆದರೆ ಸದರಿ ಪ್ರತಿಮೆಯು ತೆರೆದ ಪ್ರದೇಶದಲ್ಲಿರುವುದರಿಂದ ವಾತಾವರಣ ಹಾಗೂ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗುತ್ತಿತ್ತು. ಇದನ್ನು ಗಮನಿಸಿ ಮಹಾತ್ಮ ಗಾಂಧಿಜೀಯವರ ಪುತ್ಥಳಿಗೆ ತೋರಲಾಗುತ್ತಿರುವ ಅಗೌರವದ ಬಗ್ಗೆ ವ್ಯಥೆಪಟ್ಟು ಕೂಡಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳಿಗೆ ಎರಡು ಬಾರಿ ಪತ್ರ ಬರೆದು ಪ್ರತಿಮೆಯನ್ನು ಶುಭ್ರವಾಗಿರಿಸಿ ಸೂಕ್ತ ಗೌರವ ಸಲ್ಲಿಸುವಂತೆ ಸೂಚನೆ ನೀಡಿದ್ದರು.



ಈ ಬಗ್ಗೆ ರಾಜ್ಯ ಕಾನೂನು, ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಶ್ರೀ ಹೆಚ್.ಕೆ ಪಾಟೀಲರು ಸಹ ಸೂಕ್ತ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರ ಒತ್ತಾಯಪೂರ್ವಕ ಆಗ್ರಹ ಹಾಗೂ ಸಚಿವರಾದ ಶ್ರೀ ಹೆಚ್.ಕೆ ಪಾಟೀಲರ ಸೂಚನೆಯಂತೆ ಅಧಿಕಾರಿಗಳು ರಾಷ್ಟ್ರಪಿತ ಮಹಾತ್ಮ ಗಾಂಧಿಜೀಯವರ ಪುತ್ಥಳಿಗೆ ರಾಸಾಯನಿಕಯುಕ್ತ ಪದಾರ್ಥ ಹೊಂದಿದ ಸಾಧನವನ್ನು ಬಳಸಿ ಪಕ್ಷಿಗಳು ಪುತ್ಥಳಿ ಮೇಲೆ ಕುಳಿತುಕೊಳ್ಳದಂತೆ ಕ್ರಮ ಕೈಗೊಂಡಿದ್ದು ಇಂದು ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಹಾಗೂ ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪುತ್ಥಳಿಯ ಮೇಲೆ ಪಕ್ಷಿಗಳ ಮಲ-ಮೂತ್ರ ಬೀಳದಂತೆ ಹಾಗೂ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗದಂತೆ ಅಗತ್ಯ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ನೈಜ ಸೌಂದರ್ಯ, ಬಾಹ್ಯ ಆಕರ್ಷಣೆ ಕುಂದದಂತೆ ನಿರಂತರವಾಗಿ ಸೂಕ್ತ ಸಂರಕ್ಷಣಾ ಕ್ರಮ ಕೈಗೊಳ್ಳುವ ಕುರಿತು ಸೂಕ್ತ ಸಾಧನ ಬಳಸಿ ರಾಷ್ಟ್ರಪಿತ ಗಾಂಧೀಜಿಯವರ ಪ್ರತಿಮೆಗೆ ಸೂಕ್ತ ಗೌರವ ಸಲ್ಲಿಸಿ ಶುಭ್ರವಾಗಿಡುವಂತೆ ವಿಧಾನ ಪರಿಷತ್ ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಅಧಿಕಾರಿಗಳಿಗೆ ಆದೇಶಿಸಿದರು.

ಮಹಾತ್ಮ ಗಾಂಧಿಜೀಯವರ ಪ್ರತಿಮೆಯ ಸಂರಕ್ಷಣೆ ಕುರಿತಂತೆ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರಿಂದ ವ್ಯಕ್ತವಾದ ಕಾಳಜಿ ಮತ್ತು ಕಳಕಳಿ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ. ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಸಂಯುಕ್ತ ಕರ್ನಾಟಕ

# ಗಾಂಧೀಜಿ ಪುತ್ತಳಿ ಸ್ವಚ್ಛತೆ: ಸಭಾಪತಿ ಪರಿಶೀಲನೆ

**ಬೆಂಗಳೂರು:** ನಗರದ ವಿಧಾನಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದಲ್ಲಿರುವ ಮಹಾತ್ಮ ಗಾಂಧೀಜಿಯವರ ಕಂಚಿನ ಪ್ರತಿಮೆಯನ್ನು ಸ್ವಚ್ಛಗೊಳಿಸಿರುವುದನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ್ ವೀಕ್ಷಣೆ ಮಾಡಿದರು.

ಸುಮಾರು ವರ್ಷಗಳಿಂದ ಪ್ರತಿಮೆಯನ್ನು ಸ್ವಚ್ಛಮಾಡದೆ ಹಾಗೆ ಬಿಡಲಾಗಿತ್ತು. ಈ ಕುರಿತು ಸಭಾಪತಿಗಳು ಪ್ರವಾಸೋದ್ಯಮ ಇಲಾಖೆಗೆ ಎರಡು ಪತ್ರ ಬರೆದಿದ್ದರು. ಪ್ರತಿಮೆ ಮೇಲೆ ಪಕ್ಷಿಗಳು ಕುಳಿತು ಮಲಿನ ಮಾಡಿವೆ. ರಾಜ್ಯ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ವಿಧಾನಸೌಧ ವೀಕ್ಷಣೆಗೆ ಬರುವ ಪ್ರವಾಸಿಗರು, ಗಣ್ಯವ್ಯಕ್ತಿಗಳು ಕಂಚಿನ ಪ್ರತಿಮೆ ಬಳಿ ನಿಂತು ಫೋಟೋ ತೆಗೆದುಕೊಂಡು ಹೋಗುತ್ತಾರೆ. ಆದರೆ, ಪ್ರತಿಮೆ ಮಾತ್ರ ಅಸ್ವಚ್ಛತೆಯಿಂದ ಕೂಡಿದೆ. ಆದ್ದರಿಂದ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದರು.

ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಸಂಸದೀಯ ವ್ಯವಹಾರ ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ ಪಾಟೀಲ್ ಬುಧವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪುತ್ಥಳಿಯ ಮೇಲೆ ಪಕ್ಷಿಗಳು ಕುಳಿತುಕೊಳ್ಳದಂತೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಇಲ್ಲದಿದ್ದರೆ ಪ್ರತಿಮೆ ಸೌಂದರ್ಯಕ್ಕೆ ಧಕ್ಕೆಯಾಗಲಿದೆ ಎಂದು ಅಧಿಕಾರಿಗಳಿಗೆ ಹೇಳಿದರು. ಇದೇ ವೇಳೆ ಸಭಾಪತಿ ಅವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಇದ್ದರು.



ಬೆಂಗಳೂರಿನ ವಿಧಾನಸೌಧ ಆವರಣದಲ್ಲಿರುವ ಗಾಂಧೀಜಿ ಅವರ ಕಂಚಿನ ಪುತ್ಥಳಿಯನ್ನು ಸಭಾಪತಿ ಬಸವರಾಜ್ ಹೊರಟ್ಟಿ, ಸಚಿವ ಎಚ್.ಕೆ.ಪಾಟೀಲ್ ಬುಧವಾರ ವೀಕ್ಷಣೆ ಮಾಡಿದರು.

Bangalore Edition
May 23, 2024 Page No. 08
Powered by: erelego.com

# ಮಹಾತ್ಮ ಗಾಂಧಿಜೀ ಪುತ್ಥಳಿ ಸಂರಕ್ಷಣೆಗೆ ಅಗತ್ಯ ಕ್ರಮ



**ಬೆಂಗಳೂರು** : ರಾಜ್ಯದ ಶಕ್ತಿ ಕೇಂದ್ರವಾದ ವಿಧಾನ ಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದ ತೆರೆದ ಪ್ರದೇಶದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಾಸಕ್ತ ಕಂಚಿನ ಪ್ರತಿಮೆಗೆ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಗೆ ಉಂಟಾಗುತ್ತಿದ್ದನ್ನು ಬಹಳ ನೋವಿನಿಂದ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಸರ್ಕಾರದ ಗಮನ ಸೆಳೆದು ಗಾಂಧಿಜೀ ಪುತ್ಥಳಿಯನ್ನು ತ್ಯಾಜ್ಯ ಮುಕ್ತವನ್ನಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇಶದ ಪ್ರತಿಷ್ಠಿತ ಕಟ್ಟಡವೆಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ವಿಧಾನ ಸೌಧದ ವೀಕ್ಷಣೆಗೆ ನಿತ್ಯವೂ ದೇಶ ವಿದೇಶಗಳಿಂದ, ರಾಜ್ಯ, ಅಂತಾರಾಜ್ಯಗಳಿಂದ ಗಣ್ಯರು, ಪ್ರವಾಸಿಗರು, ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಆ ಸಂದರ್ಭದಲ್ಲಿ ಎಲ್ಲರೂ ಕಡ್ಡಾಯವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆ ವೀಕ್ಷಿಸಿ ಅಲ್ಲಿ ಛಾಯಾ ಚಿತ್ರಗಳನ್ನು ತೆಗೆದುಕೊಳ್ಳುವ ದೃಶ್ಯವು ನಿತ್ಯ ಸದೃಶ್ಯವಾದುದ್ದು. ಆದರೆ ಸದರಿ ಪ್ರತಿಮೆಯು ತೆರೆದ ಪ್ರದೇಶದಲ್ಲಿರುವುದರಿಂದ ವಾತಾವರಣ ಹಾಗೂ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗುತ್ತಿತ್ತು. ಇದನ್ನು ಗಮನಿಸಿ ಮಹಾತ್ಮ ಗಾಂಧಿಜೀಯವರ ಪುತ್ಥಳಿಗೆ ತೋರಲಾಗುತ್ತಿರುವ ಅಗೌರವದ ಬಗ್ಗೆ ವ್ಯಥೆಪಟ್ಟು ಕೂಡಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳಿಗೆ ಎರಡು ಬಾರಿ ಪತ್ರ ಬರೆದು ಪ್ರತಿಮೆಯನ್ನು ಶುಭ್ರವಾಗಿರಿಸಿ ಸೂಕ್ತ ಗೌರವ ಸಲ್ಲಿಸುವಂತೆ ಸೂಚನೆ ನೀಡಿದ್ದರು. ಈ ಬಗ್ಗೆ ರಾಜ್ಯ ಕಾನೂನು, ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸಹ ಸೂಕ್ತ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರ ಒತ್ತಾಯಪೂರ್ವಕ ಆಗ್ರಹ ಹಾಗೂ ಸಚಿವರಾದ ಹೆಚ್. ಕೆ ಪಾಟೀಲರ ಸೂಚನೆಯಂತೆ ಅಧಿಕಾರಿಗಳು ರಾಷ್ಟ್ರಪಿತ ಮಹಾತ್ಮ ಗಾಂಧಿಜೀಯವರ ಪುತ್ಥಳಿಗೆ ರಾಸಾಯನಿಕಯುಕ್ತ ಪದಾರ್ಥ ಹೊಂದಿದ ಸಾಧನವನ್ನು ಬಳಸಿ ಪಕ್ಷಿಗಳು ಪುತ್ಥಳಿ ಮೇಲೆ ಕುಳಿತುಕೊಳ್ಳದಂತೆ ಕ್ರಮ ಕೈಗೊಂಡಿದ್ದು ಇಂದು ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಹಾಗೂ ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪುತ್ಥಳಿಯ ಮೇಲೆ ಪಕ್ಷಿಗಳ ಮಲ-ಮೂತ್ರ ಬೀಳದಂತೆ ಹಾಗೂ ಪ್ರತಿಮೆಯ ಸೌಂದರ್ಯಕ್ಕೆ ಧಕ್ಕೆ ಉಂಟಾಗದಂತೆ ಅಗತ್ಯ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ನೈಜ ಸೌಂದರ್ಯ, ಬಾಹ್ಯ ಆಕರ್ಷಣೆ ಕುಂದದಂತೆ ನಿರಂತರವಾಗಿ ಸೂಕ್ತ ಸಂರಕ್ಷಣಾ ಕ್ರಮ ಕೈಗೊಳ್ಳುವ ಕುರಿತು ಸೂಕ್ತ ಸಾಧನ ಬಳಸಿ ರಾಷ್ಟ್ರಪಿತ ಗಾಂಧೀಜಿಯವರ ಪ್ರತಿಮೆಗೆ ಸೂಕ್ತ ಗೌರವ ಸಲ್ಲಿಸಿ ಶುಭ್ರವಾಗಿಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಧಿಕಾರಿಗಳಿಗೆ ಆದೇಶಿಸಿದರು.

ಮಹಾತ್ಮ ಗಾಂಧಿಜೀಯವರ ಪ್ರತಿಮೆಯ ಸಂರಕ್ಷಣೆ ಕುರಿತಂತೆ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರಿಂದ ವ್ಯಕ್ತವಾದ ಕಾಳಜಿ ಮತ್ತು ಕಳಕಳಿ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ.

ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.